ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ:ಎಡಿಎಂ-2[4]ಆ.ಮಾ.ಅ-26/2021-22 ದಿನಾಂಕ: 27-07-2021

## ಜ್ಞಾಪನ

ವಿಷಯ: ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ ಮಾಧ್ಯಮದ ಜೊತೆ ಹೆಚ್ಚುವರಿ ಆಂಗ್ಲ ಮಾಧ್ಯಮ ವಿಭಾಗವನ್ನು ಪ್ರಾರಂಭಿಸುವ ಬಗ್ಗೆ

ಉಲ್ಲೇಖ: 1. ಈ ಕಛೇರಿ ಅಧಿಕೃತ ಜ್ಞಾಪನಾ ಸಂಖ್ಯೆ: ಎಡಿಎಂ2 (1) ಆ.ಮಾ.01/17-18 ದಿನಾಂಕ: 05-06-2017

2. ಸರ್ಕಾರದ ಆದೇಶ ಸಂಖ್ಯೆ: ಇಡಿ 109 ಯೋಯೋಕ 2018, ಬೆಂಗಳೂರು, ದಿನಾಂಕ: 26-10-2018

**********

ಪ್ರಸ್ತಾವನೆ:

2021-22 ನೇ ಸಾಲಿನಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 6 ಮತ್ತು 7 ನೇ ತರಗತಿಯನ್ನು ಪ್ರಸ್ತುತ ನಡೆಯುತ್ತಿರುವ (ಬೋಧಿಸುತ್ತಿರುವ) ಮಾಧ್ಯಮದ ಜೊತೆಯಲ್ಲಿ ಒಂದು ಹೆಚ್ಚುವರಿ ಆಂಗ್ಲ ಮಾಧ್ಯಮ ವಿಭಾಗವನ್ನು ಆಂಗ್ಲ ಮಾಧ್ಯಮದಲ್ಲಿ ತೆರೆದು ಬೋಧಿಸಲು ಅನುಮತಿ ನೀಡುವ ಬಗ್ಗೆ ವಿವಿಧ ಜಿಲ್ಲೆಗಳ ಉಪನಿರ್ದೇಶಕರ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಗಳು ಈ ಕಛೇರಿಯಲ್ಲಿ ಸ್ವೀಕೃತಗೊಳ್ಳುತ್ತಿವೆ. ಈ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗಿ, ಆಡಳಿತಾತ್ಮಕ ಮತ್ತು ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಸಕಾಲಿಕವಾಗಿ ಕ್ರಮವಹಿಸಿ ಹೆಚ್ಚುವರಿ ವಿಭಾಗವನ್ನು ತೆರೆದು ಆಂಗ್ಲ ಮಾಧ್ಯಮದಲ್ಲಿ ಬೋಧಿಸುವ ಬಗ್ಗೆ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಆದೇಶ:

2021-22 ನೇ ಸಾಲಿನಲ್ಲಿ ರಾಜ್ಯದ ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು/ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಗಳಲ್ಲಿ ಪ್ರಸ್ತುತ ಇರುವ ಮಾಧ್ಯಮದ ಜೊತೆಗೆ ಕೆಳಕಂಡ ಷರತ್ತುಗಳನ್ನು ಪೂರೈಸಿರುವ ಬಗ್ಗೆ ಖಾತ್ರಿ ಪಡಿಸಿಕೊಂಡು ಒಂದು ಹೆಚ್ಚುವರಿ ವಿಭಾಗವನ್ನು ತೆರೆದು ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ ಅನುಮತಿ ನೀಡುವ ಅಧಿಕಾರವನ್ನು ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಪ್ರತ್ಯಾಯೋಜಿಸಲಾಗಿದೆ.

ಷರತ್ತುಗಳು:

1. ಸರ್ಕಾರದ ಆದೇಶ ಸಂಖ್ಯೆ: ಇಡಿ 109 ಯೋಯೋಕ 2018, ಬೆಂಗಳೂರು, ದಿನಾಂಕ: 26-10-2018 ರಲ್ಲಿನ ಎಲ್ಲಾ ಷರತ್ತುಗಳನ್ನು ಪಾಲಿಸತಕ್ಕದ್ದು. (ಪ್ರತಿ ಲಗತ್ತಿಸಿದೆ)
2. ಸರ್ಕಾರಿ ಶಾಲೆಯು ಹಿರಿಯ ಪ್ರಾಥಮಿಕ/ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಾಗಿದ್ದು, ಒಂದರಿಂದ ಏಳನೇ/ಎಂಟನೇ ತರಗತಿಯವರೆಗೆ ನಡೆಯುತ್ತಿರಬೇಕು.
3. ಶಾಲೆಯಲ್ಲಿ ಆಸಕ್ತ ವಿದ್ಯಾರ್ಥಿಗಳ ಸಂಖ್ಯೆಯು ಗಮನಾರ್ಹವಾಗಿರಬೇಕು ಮತ್ತು ಇದರಿಂದಾಗಿ ಪ್ರಸ್ತುತ ನಡೆಯುತ್ತಿರುವ ಮಾಧ್ಯಮಕ್ಕೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಬೇಕು.

4. ಕನ್ನಡ ಮಾಧ್ಯಮ ಶಾಲೆಗಳನ್ನು ನಡೆಸುವುದು ಸರ್ಕಾರದ ಆದ್ಯತೆಯಾಗಿದ್ದು, ಬೇರೆ ಮಾಧ್ಯಮದ ವಿಭಾಗಗಳನ್ನು ಪ್ರಾರಂಭಿಸುವುದರಿಂದ ಕನ್ನಡ ಮಾಧ್ಯಮಕ್ಕೆ ಧಕ್ಕೆಯಾಗಬಾರದು.
5. ಸದರಿ ಶಾಲೆಯಲ್ಲಿ ಈಗಾಗಲೇ ನಡೆಯುತ್ತಿರುವ ತರಗತಿಗಳ ಕೊಠಡಿ, ಕಟ್ಟಡ ಹಾಗೂ ಮೂಲಭೂತ ಸೌಕರ್ಯಗಳಲ್ಲಿಯೇ ಆಂಗ್ಲ ಮಾಧ್ಯಮ ಹೆಚ್ಚುವರಿ ವಿಭಾಗಗಳನ್ನು ನಡೆಸುವುದು.
6. ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಹಾಲಿ ಇರುವ ಶಿಕ್ಷಕರನ್ನು ಹೊಂದಾಣಿಕೆ ಮಾಡಿಕೊಳ್ಳುವುದು
7. 6 ಮತ್ತು 7 ನೇ ತರಗತಿಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಹೆಚ್ಚುವರಿ ವಿಭಾಗವನ್ನು ತೆರೆಯುವ ಬಗ್ಗೆ ಶಿಕ್ಷಕರ ಒಪ್ಪಿಗೆ ಹಾಗೂ ಎಸ್.ಡಿ.ಎಂ.ಸಿ. ಅಭಿಪ್ರಾಯದ ನಡಾವಳಿಯನ್ನು ದಾಖಲಿಸುವುದು.
8. 6 ಮತ್ತು 7 ನೇ ತರಗತಿಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಹೆಚ್ಚುವರಿ ವಿಭಾಗವನ್ನು ತೆರೆಯುವ ಬಗ್ಗೆ ಪೋಷಕರ ಒಪ್ಪಿಗೆ ಪತ್ರವನ್ನು ಪಡೆದಿರಬೇಕು.
9. 6 ಮತ್ತು 7ನೇ ತರಗತಿಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಹೆಚ್ಚುವರಿ ವಿಭಾಗವನ್ನು ತೆರೆದು ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಇಲಾಖೆಗೆ/ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆ ಉಂಟಾಗಬಾರದು.
10. ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಆಂಗ್ಲ ಮಾಧ್ಯಮದ ಪಠ್ಯಪುಸ್ತಕಗಳ ಬೇಡಿಕೆ ಪಟ್ಟಿಯನ್ನು ಸಕಾಲದಲ್ಲಿ ಕರ್ನಾಟಕ ಪಠ್ಯಪುಸ್ತಕ ಸಂಘಕ್ಕೆ ಸಲ್ಲಿಸುವುದು.
11. ಪ್ರಸ್ತಾಪಿತ ಶಾಲೆಯಿಂದ ಈಗಾಗಲೇ ಆಂಗ್ಲ ಭಾಷಾ ತರಬೇತಿ ಪಡೆಯದೇ ಇದ್ದಲ್ಲಿ, ಕನಿಷ್ಠ ಇಬ್ಬರು ಶಿಕ್ಷಕರನ್ನು ಆರ್.ಐ.ಇ., ಬೆಂಗಳೂರು ಇವರು ಆಯೋಜಿಸುವ ಒಂದು ತಿಂಗಳ ಅವಧಿಯ " English Language Empowerment Programme For Primary School Teachers in Karnataka" ತರಬೇತಿಗೆ ನಿಯೋಜಿಸುವುದು.
12. ಪ್ರಸ್ತುತ ತಮ್ಮ ವ್ಯಾಪ್ತಿಯಲ್ಲಿ ಲಭ್ಯವಿರುವ ಹೆಚ್ಚುವರಿ ಶಿಕ್ಷಕರನ್ನು ಸದರಿ ಆಂಗ್ಲ ಮಾಧ್ಯಮ ಬೋಧನೆಗೆ ಬಳಕೆ ಮಾಡಿಕೊಳ್ಳಲು ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು ನಿಯಮಾನುಸಾರ ಕ್ರಮವಹಿಸುವುದು.
13. ಸದರಿ ಶಾಲೆಗೆ ಹೆಚ್ಚುವರಿ ಮೂಲಭೂತ ಸೌಲಭ್ಯಗಳಾದ ತರಗತಿ ಕೊಠಡಿ ನಿರ್ಮಾಣ, ಶೌಚಾಲಯ ಇತ್ಯಾದಿಗಳನ್ನು ನಿರ್ಮಿಸುವ ಅಗತ್ಯವಿದ್ದಲ್ಲಿ, ಅವುಗಳನ್ನು ಜಿಲ್ಲಾ ಪಂಚಾಯತ್ ವತಿಯಿಂದ ಉದ್ಯೋಗ ಖಾತ್ರಿ ಯೋಜನೆ ಅಥವಾ ಜನಪ್ರತಿನಿಧಿಗಳ ಅನುದಾನ ಅಥವಾ ದಾನಿಗಳ ಸಹಾಯದಿಂದ ನಿರ್ಮಿಸಲು ಪ್ರಯತ್ನಿಸುವುದು.

(ಮಾನ್ಯ ಆಯುಕ್ತರ ಆದೇಶದಂತೆ)

ನಿರ್ದೇಶಕರು
ಪ್ರಾಥಮಿಕ ಶಿಕ್ಷಣ

ಇವರಿಗೆ

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ. ಧಾರವಾಡ, / ಕಲಬುರಗಿ.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು

1. ನೋಡಲ್ ಅಧಿಕಾರಿಗಳು, ಇ–ಆಡಳಿತ ವಿಭಾಗ, ಇವರು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮವಹಿಸುವುದು.
2. ಕಛೇರಿ ಪ್ರತಿ

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ ಮಾಧ್ಯಮದ ಜೊತೆ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸುವ ಬಗ್ಗೆ.

ಓದಲಾಗಿದೆ :
1. 2018–19ನೇ ಸಾಲಿನ (ಜುಲೈ) ಆಯವ್ಯಯ ಭಾಷಣದ ಕಂಡಿಕೆ (50)
2. ಸರ್ಕಾರದ ಆದೇಶ ಸಂಖ್ಯೆ: ಇಡಿ 109 ಯೋಯೋಕ 2018, ದಿನಾಂಕ:05.09.2018.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಕಚೇರಿ ಅಧಿಕೃತ ಜ್ಞಾಪನ ಸಂಖ್ಯೆ: ಎಡಿಎಂ.2(1) ಅ.ಮಾ.ಅ01/2017–18, ದಿ:05.06.2017.
4. ನಿರ್ದೇಶಕರು, ಪ್ರಾದೇಶಿಕ ಆಂಗ್ಲಭಾಷಾ ತರಬೇತಿ ಸಂಸ್ಥೆ, ದಕ್ಷಿಣ ಭಾರತ, ಬೆಂಗಳೂರು ಇವರ ಪತ್ರ ಸಂಖ್ಯೆ:RIE/Govt-KT/1000 Eng.Med School/2018-19/223, ದಿನಾಂಕ:17.09.2018.

-02(4)

148151
19/11/18

**ಪ್ರಸ್ತಾವನೆ:**

ಮೇಲೆ ಓದಲಾದ 2018–19ನೇ ಸಾಲಿನ (ಜುಲೈ) ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡಂತೆ ಘೋಷಿಸಿರುತ್ತಾರೆ.

> *"ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ ಮಾಧ್ಯಮ ತರಗತಿಗಳ ಜೊತೆಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಆರಂಭಿಸಲಾಗುವುದು. ಇದರಿಂದ ಹೆಚ್ಚು ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಆಕರ್ಷಿಸಬಹುದಾಗಿದೆ. ಆರಂಭಿಕವಾಗಿ 1000 ಶಾಲೆಗಳಲ್ಲಿ ಇಂತಹ ಪ್ರಯೋಗ ನಡೆಸಲಾಗುವುದು"*

ಮೇಲೆ ಓದಲಾದ ಕ್ರಮಾಂಕ (2) ರ ಸರ್ಕಾರದ ಆದೇಶದಲ್ಲಿ, 2018–19ನೇ ಸಾಲಿನಿಂದ ರಾಜ್ಯದ ಒಂದು ಸಾವಿರ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ ಮಾಧ್ಯಮ ತರಗತಿಗಳ ಜೊತೆಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಆರಂಭಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3) ರ ಆಯುಕ್ತಾಲಯದ ಅಧಿಕೃತ ಜ್ಞಾಪನದಲ್ಲಿ ಸರ್ಕಾರಿ ಶಾಲೆಗಳಲ್ಲಿ 6 ಮತ್ತು 7ನೇ ತರಗತಿಯಲ್ಲಿ ಪ್ರಸ್ತುತ ಬೋಧಿಸುತ್ತಿರುವ ಮಾಧ್ಯಮದ ಜೊತೆಯಲ್ಲಿ ಒಂದು ಹೆಚ್ಚುವರಿ ವಿಭಾಗವನ್ನು ತೆರೆದು ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಜಿಲ್ಲಾ ಉಪನಿರ್ದೇಶಕರಿಗೆ ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (4) ರ ಪತ್ರದಲ್ಲಿ ನಿರ್ದೇಶಕರು, ಪ್ರಾದೇಶಿಕ ಆಂಗ್ಲಭಾಷಾ ತರಬೇತಿ ಸಂಸ್ಥೆ, ದಕ್ಷಿಣ ಭಾರತ, ಬೆಂಗಳೂರು ಇವರು ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸುವ ಬಗ್ಗೆ ವಿಸ್ತೃತ ವರದಿ ನೀಡಿದ್ದು, ಆಂಗ್ಲಭಾಷೆಯಲ್ಲಿ ಪರಿಣಾಮಕಾರಿಯಾಗಿ ಬೋಧಿಸಬಲ್ಲ ಶಿಕ್ಷಕರನ್ನು ಗುರುತಿಸಿ, ಅವರಿಗೆ ಉತ್ತಮ ತರಬೇತಿ ನೀಡಿ ಪ್ರಾಯೋಗಿಕವಾಗಿ ಒಂದು ಸಾವಿರ ಶಾಲೆಗಳಲ್ಲಿ 1ನೇ ತರಗತಿಯಿಂದಲೇ ಆಂಗ್ಲ ಮಾಧ್ಯಮವನ್ನು ಪ್ರಾರಂಭಿಸಲು ಕ್ರಿಯಾಯೋಜನೆ ಸಿದ್ಧಪಡಿಸಿ ಸರ್ಕಾರದ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 109 ಯೋಯೋಕ 2018, ಬೆಂಗಳೂರು,**
**ದಿನಾಂಕ:26/10/2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಒಂದು ಸಾವಿರ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿ ಕನ್ನಡ ಮಾಧ್ಯಮದೊಂದಿಗೆ 1ನೇ ತರಗತಿಯಿಂದಲೇ ಆಂಗ್ಲ ಮಾಧ್ಯಮವನ್ನು ಪ್ರಾರಂಭಿಸಲು ಸಲ್ಲಿಸಿರುವ ಕ್ರಿಯಾಯೋಜನೆಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಿದೆ.

ಷರತ್ತುಗಳು:

1. ಆಯವ್ಯಯ ಘೋಷಣೆಯಂತೆ ರಾಜ್ಯಾದ್ಯಂತ ಒಂದು ಸಾವಿರ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು 1ನೇ ತರಗತಿಯಿಂದ ಆಂಗ್ಲ ಮಾಧ್ಯಮ ತರಗತಿ ಪ್ರಾರಂಭಿಸಲು ಆಯ್ಕೆಗೊಳಿಸತಕ್ಕದ್ದು.
2. ಪ್ರಸ್ತುತ 1ನೇ ತರಗತಿಗೆ ಮಾತ್ರ ಆಂಗ್ಲ ಮಾಧ್ಯಮ ಪ್ರಾರಂಭಿಸಿ, ಮುಂದಿನ ವರ್ಷಗಳಲ್ಲಿ ಮುಂದಿನ ತರಗತಿಗೆ ವಿಸ್ತರಿಸತಕ್ಕದ್ದು.
3. 2017–18 ಮತ್ತು 2018–19ನೇ ಸಾಲಿನ ಆಯವ್ಯಯ ಘೋಷಣೆಯಂತೆ ಪ್ರಾರಂಭಿಸಲಾಗುತ್ತಿರುವ 276 'ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ' ಕಡ್ಡಾಯವಾಗಿ 1ನೇ ತರಗತಿಯಿಂದ ಕನ್ನಡ ಮಾಧ್ಯಮದೊಂದಿಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲು ಕ್ರಮವಹಿಸತಕ್ಕದ್ದು.
4. ಈಗಾಗಲೇ 6 ಮತ್ತು 7ನೇ ತರಗತಿಯಲ್ಲಿ ಆಂಗ್ಲ ಮಾಧ್ಯಮದಲ್ಲಿ ಬೋಧಿಸಲಾಗುತ್ತಿರುವ ಶಾಲೆಗಳಲ್ಲಿ 1ನೇ ತರಗತಿಯಿಂದ ಪ್ರತ್ಯೇಕವಾಗಿ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲು ಮೊದಲ ಆಧ್ಯತೆ ನೀಡತಕ್ಕದ್ದು.
5. ಹೆಚ್ಚಿನ ದಾಖಲಾತಿ ಹೊಂದಿರುವ ಗ್ರಾಮೀಣ ಪ್ರದೇಶದ ಶಾಲೆಗಳಿಗೆ ಆಧ್ಯತೆ ನೀಡತಕ್ಕದ್ದು.
6. ಈಗಾಗಲೇ ಇಂಗ್ಲಿಷ್ ಬೋಧನೆಯಲ್ಲಿ ಪರಿಣತಿ ಹೊಂದಿರುವ ಕಾರ್ಯನಿರತ ಶಿಕ್ಷಕರಿಗೆ ಆಯ್ಕೆ ಪರೀಕ್ಷೆ ನಡೆಸಿ ಆಂಗ್ಲ ಮಾಧ್ಯಮ ತರಗತಿಗಳಲ್ಲಿ ಬೋಧಿಸಲು ನಿಯೋಜಿಸತಕ್ಕದ್ದು.
7. ಆಯ್ಕೆಗೊಂಡ ಶಿಕ್ಷಕರಿಗೆ ಪ್ರಾದೇಶಿಕ ಆಂಗ್ಲಭಾಷಾ ತರಬೇತಿ ಸಂಸ್ಥೆಯ ಮೂಲಕ 15 ದಿನಗಳ ಪ್ರವೇಶ ತರಬೇತಿ ನೀಡತಕ್ಕದ್ದು ಮತ್ತು ಪ್ರತಿ ತಿಂಗಳು ಸಂಸ್ಥೆಯೊಂದಿಗೆ ವಿಡಿಯೋ ಸಮ್ಮೇಳನ ನಡೆಸತಕ್ಕದ್ದು. ಈ ಉದ್ದೇಶಕ್ಕೆ ತಗಲುವ ವೆಚ್ಚವನ್ನು ಸಂಸ್ಥೆಗೆ ನಿಯಮಾನುಸಾರ ಒದಗಿಸಲಾಗುವ ಅನುದಾನದಲ್ಲಿ ಭರಿಸತಕ್ಕದ್ದು.
8. ಇಂಗ್ಲೀಷ್ ಮಾಧ್ಯಮ ತರಗತಿ ಪ್ರಾರಂಭಿಸಲು ಅಗತ್ಯವಾದ ಪಠ್ಯವಸ್ತು, ಪಠ್ಯಪುಸ್ತಕಗಳು ಹಾಗೂ ಸ್ಮಾರ್ಟ್ ತರಗತಿಗಳಲ್ಲಿ ಬೋಧಿಸಲು ಅನುಕೂಲವಾಗುವಂತೆ ಧ್ವನಿ ಮತ್ತು ದೃಶ್ಯಗಳನ್ನೊಳಗೊಂಡ ಇ-ಕಂಟೆಂಟ್‌ಗಳನ್ನು ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಸಂಸ್ಥೆಯು ಸಿದ್ಧಪಡಿಸತಕ್ಕದ್ದು.

...3

ಆಯವ್ಯಯ ಘೋಷಿತ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯವಾದ ಅನುದಾನವನ್ನು 2018-19ನೇ ಸಾಲಿನ ಆಯವ್ಯಯದ 'ಶಿಕ್ಷಣ ಗುಣಮಟ್ಟ ಸುಧಾರಣೆ ಕಾರ್ಯಕ್ರಮ' ಲೆಕ್ಕ ಶೀರ್ಷಿಕೆ:2202-80-800-0-48-059 (ಇತರೆ ವೆಚ್ಚಗಳು) ರಡಿ ಒದಗಿಸಲಾದ ರೂ.1400.00 ಲಕ್ಷಗಳಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 796 ವೆಚ್ಚ-8 2018, ದಿನಾಂಕ:08.08.2018 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಯೋಇ 59 ಜಶ 2018, ದಿನಾಂಕ:06.08.2018 ರಲ್ಲಿ ನೀಡಿದ ಸಹಮತದನ್ವಯ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 04 ಟಿಎಫ್‌ಪಿ 2018, ದಿನಾಂಕ:24.07.2018ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್.ಎಸ್.ಸಾಧನ್)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಯೋಜನೆ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, (ಅಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು.
4. ನಿರ್ದೇಶಕರು (ಪ್ರಾಥಮಿಕ/ಪ್ರೌಢ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
6. ನಿರ್ದೇಶಕರು, ಪ್ರಾದೇಶಿಕ ಆಂಗ್ಲಭಾಷಾ ತರಬೇತಿ ಸಂಸ್ಥೆ, ದಕ್ಷಿಣ ಭಾರತ, ಜ್ಞಾನಭಾರತಿ ಆವರಣ, ಬೆಂಗಳೂರು.
7. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, ನಂ.49, ಖನಿಜ ಭವನ, ರೇಸ್ಕೋರ್ಸ್ ರಸ್ತೆ, ಬೆಂಗಳೂರು.
8. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ಸರ್ಕಾರದ ಉಪಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ & ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ, ಬೆಂಗಳೂರು ಇವರ ಆಪ್ತ ಸಹಾಯಕರು.
5. ನಿರ್ದೇಶಕರು, ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರ ಆಪ್ತ ಸಹಾಯಕರು.